# ನಿಧನ ಸುದ್ದಿ

**ಚಿತ್ರದುರ್ಗ, ಆ**. 5 - ನಗರದ ಎಸ್.ಜೆ.ಎಂ. ದಂತ ಮಹಾವಿದ್ಯಾಲಯದ ನೌಕರ ಎನ್. ಚನ್ನಂಜಪ್ಪಸ್ವಾಮಿ (57ವರ್ಷ) ಇವರು ಅನಾರೋಗ್ಯದಿಂದ ಇಂದು ನಿಧನರಾದರು. ಮೃತರ ಅಗಲಿಕೆಯಿಂದ ಉಂಟಾಗಿರುವ ನೋವನ್ನು ಸಹಿಸಿಕೊಳ್ಳುವ ಶಕ್ತಿಯನ್ನು ಬಸವಾದಿ ಪ್ರಮಥರು ಅವರ ಕುಟುಂಬ ವರ್ಗದವರಿಗೆ ನೀಡಲಿ ಎಂದು ಡಾ. ಶಿವಮೂರ್ತಿ ಮುರುಘಾ ಶರಣರು ಸಂತಾಪ ವ್ಯಕ್ತಪಡಿಸಿದ್ದಾರೆ. ಎಸ್.ಜೆ.ಎಂ. ವಿದ್ಯಾಪೀಠದ ಕಾರ್ಯದರ್ಶಿ ಎ.ಜೆ.ಪರಮಶಿವಯ್ಯ, ಕಾರ್ಯನಿರ್ವಹಣಾಧಿಕಾರಿ ಎಂ.ಜಿ.ದೊರೆಸ್ವಾಮಿ, ಕಾಲೇಜಿನ ಪ್ರಾಂಶುಪಾಲರಾದ ಡಾ| ಆರ್. ಗೌರಮ್ಮ, ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ಹಾಗು ಎಸ್‌ಜೆಎಂ ವಿದ್ಯಾಪೀಠದ ಆಡಳಿತ ಮಂಡಳಿ ಮತ್ತು ಸಮಸ್ತ ನೌಕರ ವರ್ಗದವರು ಸಂತಾಪ ಸೂಚಿಸಿದ್ದಾರೆ.

